**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 8/2022**

**ಚಾ.ಸಾ. :-3**
**ಪ್ರಾ.ಸಾ. :-2**

| | |
|---|---|
| ಹೆಸರು | : ಗಿರೀಶ್ |
| ತಂದೆಯ ಹೆಸರು | : ಚಲುವೇಗೌಡ |
| ವಯಸ್ಸು | : 37 ವರ್ಷ |
| ಉದ್ಯೋಗ | : ಗಾರೆ ಕೆಲಸ |
| ವಾಸಸ್ಥಳ | : ರಂಗನಾಥನಗರ |

---

**ಪ್ರಮಾಣೀಕರಿಸಲಾದ ದಿನಾಂಕಃ- 02.03.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಮೃತ ನರಸಿಂಹೇಗೌಡರು ನನಗೆ ಗೊತ್ತಿಲ್ಲ. ಚಾ.ಸಾ-1 ಪರಿಚಯವಿಲ್ಲ. ಚಾ.ಸಾ-2 ನನ್ನ ಸ್ನೇಹಿತ. ಅಪಘಾತವನ್ನು ನಾನು ನೇರವಾಗಿ ನೋಡಿರುವುದಿಲ್ಲ. ಅಪಘಾತವು ಹೇಗೆ, ಯಾವ ರೀತಿ ಹಾಗೂ ಯಾರ ನಿರ್ಲಕ್ಷ್ಯತನದಿಂದ ಉಂಟಾಗಿರುತ್ತದೆ ಎಂಬುದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿಲ್ಲ.

(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)

**<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>**

ದಿನಾಂಕಃ 11.04.2021 ರಂದು ಸಂಜೆ 7.30 ರ ಸಮಯಕ್ಕೆ ನಾನು ಮತ್ತು ಚಾ.ಸಾ-2 ರವರು ನಡೆದುಕೊಂಡು ಹೋಗುತ್ತಿದ್ದಾಗ ನಮ್ಮ ಮುಂದೆ ದ್ವಿಚಕ್ರ ವಾಹನ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ವ್ಯಕ್ತಿಗೆ ಅಪಘಾತಪಡಿಸಿರುತ್ತದೆ ಎಂದರೆ ಸುಳ್ಳು. ಆ ಸಮಯದಲ್ಲಿ ಗಾಯಾಳುಗಳನ್ನು ನಾನು ಮತ್ತು ಚಾ.ಸಾ-2 ರವರು ಸೇರಿ ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತೇವೆ ಎಂದರೆ ಸುಳ್ಳು.

ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಸಂಪೂರ್ಣ ಹೇಳಿಕೆಯನ್ನು ಸಾಕ್ಷಿಯವರಿಗೆ ಓದಿ ಹೇಳಲಾಗಿ ಸಾಕ್ಷಿಯು ಸದರಿ ಹೇಳಿಕೆಯನ್ನು ಪೊಲೀಸರಿಗೆ ನೀಡಿರುವುದಿಲ್ಲ ಎಂದು ನಿರಾಕರಿಸಿದ ಮೇರೆಗೆ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು:</u>** ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**